ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
**KARNATAKA LEGISLATIVE ASSEMBLY, RESEARCH AND REFERENCE BRANCH**

6

ಪತ್ರಿಕಾ ತುಣುಕುಗಳು
**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT: ಕರ್ನಾಟಕ ವಿಧಾನ ಮಂಡಲ ಅಧಿವೇಶನ

ಪತ್ರಿಕೆಯ ಹೆಸರು : NAME OF THE NEWS PAPER: ವಿಶ್ವವಾಣಿ    ದಿನಾಂಕ : DATE : 07/12/2020

## ಮಹತ್ವದ ಕಾಯಿದೆ ಜಾರಿಗೊಳಿಸಲು ಸರಕಾರ ಉತ್ಸುಕ | ಆಡಳಿತ ಪಕ್ಷ ಕಟ್ಟಿಹಾಕಲು ಕಾಂಗ್ರೆಸ್ ಸಿದ್ಧತೆ

# ರಾಜ್ಯ ವಿಧಾನಮಂಡಲ ಅಧಿವೇಶನ ಇಂದಿನಿಂದ

7/12/20

ವಿಶ್ವವಾಣಿ ಸುದ್ದಿಮನೆ ಬೆಂಗಳೂರು

ಇಂದಿನಿಂದ ಚಳಿಗಾಲದ ಅಧಿವೇಶನ ಪ್ರಾರಂಭವಾಗಲಿದ್ದು, ಆಡಳಿತ ಮತ್ತು ಪ್ರತಿಪಕ್ಷಗಳ ನಡುವೆ ಮಾತಿನ ಚಕಮಕಿ ಹಾಗೂ ಆರೋಪ ಪ್ರತ್ಯಾರೋಪಕ್ಕೆ ವೇದಿಕೆಯಾಗಲಿದೆ.



ಸದನದ ಕಲಾಪ ವೇಳೆ ಪ್ರಶ್ನೋತ್ತರ ಅವಧಿ, 10 ಮಸೂದೆಗಳ ಮಂಡನೆಯಾಗಲಿವೆ. ಈ ಸಂದರ್ಭದಲ್ಲಿ ಒಂದು ರಾಷ್ಟ್ರ, ಒಂದು ಚುನಾವಣೆ ಕುರಿತು ಕೊನೆಯ ಎರಡು ದಿನ ಚರ್ಚೆ ನಡೆಸಲಾಗುತ್ತದೆ.

ಈ ಬಾರಿಯ ಅಧಿವೇಶನದಲ್ಲಿ ಪ್ರಮುಖವಾಗಿ ಲವ್ ಜಿಹಾದ್ ಹಾಗೂ ಗೋ ಹತ್ಯೆ ನಿಷೇಧ ಕಾಯಿದೆಗಳು ಸರಕಾರ ಮತ್ತು ಪ್ರತಿಪಕ್ಷಗಳ ನಡುವೆ ಕೋಲಾಹಲ ಸೃಷ್ಟಿಸುವ ಸಾಧ್ಯತೆಯಿದೆ. ಅಧಿವೇಶನದಲ್ಲಿ ಗೋಹತ್ಯೆ ನಿಷೇಧ ಕಾಯಿದೆಯನ್ನು ಮಂಡನೆ ಮಾಡಲಿದ್ದು, ಅದಕ್ಕೆ ಬೇಕಾದ ಎಲ್ಲ ಪೂರ್ವ ತಯಾರಿಗಳನ್ನು ಮಾಡಿಕೊಳ್ಳಲಾಗಿದೆ. 2010ರಲ್ಲಿ ಕರ್ನಾಟಕ ಗೋ ಹತ್ಯೆ ಪ್ರತಿಬಂಧಕ ಮತ್ತು ಜಾನುವಾರು ಸಂರಕ್ಷಣಾ ಕಾಯಿದೆಯ 1964 ಬದಲಾಗಿ, ಕರ್ನಾಟಕ ಜಾನುವಾರು ಪ್ರತಿಬಂಧಕ ಮತ್ತು ಸಂರಕ್ಷಣಾ ವಿಧೇಯಕ 2010ನ್ನು ಮಂಡನೆಯಾಗುವ ನಿರೀಕ್ಷೆ ಇದೆ. ಹಿಂದಿನ ಬಿಜೆಪಿ ಸರಕಾರದ ಅವಧಿಯಲ್ಲಿ ವಿಧಾನಮಂಡಲದಲ್ಲಿ ಮಂಡಿಸಿದ ನಂತರ ರಾಜ್ಯಪಾಲರ ಅನುಮೋದನೆಗೆ ಕಳುಹಿಸಲಾಗಿತ್ತು. ಅಂದು ರಾಜ್ಯಪಾಲರಾಗಿದ್ದ ಹಂಸರಾಜ್ ಭಾರದ್ವಾಜ್ ಅವರು ಇದನ್ನು ರಾಷ್ಟ್ರಪತಿಗಳ ಅನುಮೋದನೆಗೆ ಕಳುಹಿಸಿದ್ದರಿಂದ ಕಾಯಿದೆಯ ಅನುಷ್ಠಾನದಲ್ಲಿ ವಿಳಂಬವಾಯಿತು. ಅಲ್ಲದೆ ಕೇಂದ್ರ ಗೃಹ ಇಲಾಖೆ ಸಹ ಕೆಲವು ಆಕ್ಷೇಪಣೆಗಳನ್ನು ವ್ಯಕ್ತಪಡಿಸಿ ತಿದ್ದುಪಡಿಗೆ ಸೂಚನೆ ನೀಡಿತ್ತು.

ಬಿಜೆಪಿ ಸರಕಾರ ವಿಧಾನಮಂಡಲ ಅಧಿವೇಶನಕ್ಕೆ ಸಜ್ಜಾಗಿದೆ. ಸದನದಲ್ಲಿ ಮುಖ್ಯಮಂತ್ರಿ ಬೆನ್ನಿಗೆ ನಿಲ್ಲಲು ಸೂಚನೆ ನೀಡಲಾಗಿದೆ. ಬಿಜೆಪಿಯೊಳಗಿನ ಯಾವುದೇ ವಿಚಾರ ಪ್ರಸ್ತಾಪಿಸಿದರೂ ಸಮರ್ಥನೆ ಮಾಡಿಕೊಳ್ಳಲು ಸಿಎಂ ಬಿಎಸ್‌ವೈ ಸೂಚಿಸಿದ್ದಾರೆ. ಸದನದಲ್ಲಿ ವಿಪಕ್ಷಗಳು ಸರ್ಕಾರದ ವೈಫಲ್ಯವನ್ನು ಮುಂದಿಟ್ಟುಕೊಂಡು ಬಿಜೆಪಿಯನ್ನು ಇಕ್ಕಟ್ಟಿಗೆ ಸಿಲುಕಿಸಲು ನಿರ್ಧರಿಸಿದೆ. ಬಿಜೆಪಿ ಕೂಡಾ ವಿಪಕ್ಷಗಳಿಗೆ ತಿರುಗೇಟು ನೀಡಲು ಸಿದ್ಧತೆ ನಡೆಸಿದೆ.

### ಕಾಂಗ್ರೆಸ್ ಅಸ್ತ್ರ

- ಗೋಹತ್ಯೆ, ಲವ್‌ಜಿಹಾದ್ ವಿಧೇಯಕ ಜಾರಿಗೆ ವಿರೋಧ
- ಸರಕಾರದಲ್ಲಿ ಸಿಎಂ ಬಿಎಸ್‌ವೈ ಪುತ್ರ ಹಸ್ತಕ್ಷೇಪ
- ಸಮುದಾಯಕ್ಕೊಂದು ನಿಗಮ ಸ್ಥಾಪನೆಯ ಪ್ರಸ್ತಾಪ
- ಕುರುಬ ಸಮುದಾಯ 2ಎಗೆ ಸೇರ್ಪಡೆ
- ಸಂತೋಷ್ ಆತ್ಮಹತ್ಯೆ ಯತ್ನ ತನಿಖೆಗೆ ಆಗ್ರಹ

### ಬಿಜೆಪಿ ಪ್ರತ್ಯಸ್ತ್ರ

- ಭೂ ಸುಧಾರಣೆ, ಎಪಿಎಂಸಿ ಕಾಯಿದೆಗೆ ಪರಿಷತ್‌ನಲ್ಲಿ ಅಂಗೀಕಾರ
- ಸಭಾಪತಿ ವಿರುದ್ಧ ಅವಿಶ್ವಾಸ ನಿರ್ಣಯ ಮಂಡನೆ
- ಕೇಂದ್ರ ರಾಜ್ಯಕ್ಕೆ ನೀಡಿದ ಅನುದಾನ ಬಿಡುಗಡೆ
- ಜೆಡಿಎಸ್ ಮೃದುಧೋರಣೆಯಿಂದ ಬಿಜೆಪಿ ಕಾಂಗ್ರೆಸ್‌ಗೆ ಎದುರೇಟು
- ಸರಕಾರ ರಾಜ್ಯಕ್ಕೆ ನೀಡಿದ ಯೋಜನೆಗಳ ಹಣಕಾಸು ಪ್ರಸ್ತಾಪ